34

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1279 |
| 2. ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. ಉತ್ತರಿಸಬೇಕಾದ ದಿನಾಂಕ | : | 19.12.2024. |
| 4. ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಸಾರ್ವಜನಿಕ ವಲಯದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಅಸ್ಥಿರತೆ ಮನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ಅಗತ್ಯ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಿದ್ದು, ಎಲ್ಲಾ ಅರ್ಹ ಫಲಾನುಭವಿಗಳಿಗೂ ಈ ಯೋಜನೆಗಳ ಅನುಕೂಲ ತಲುಪುತ್ತಿದೆ. ಸಾರ್ವಜನಿಕ ವಲಯದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಯಾವುದೇ ಅಸ್ಥಿರತೆ ಮನೆ ಮಾಡಿರುವುದಿಲ್ಲ. |
| ಆ | ಸರ್ಕಾರಕ್ಕೆ ಹೊರೆಯಾಗಿರಬಹುದಾದ ಈ ಯೋಜನೆಗಳಿಂದ ಅಭಿವೃದ್ಧಿ ಯೋಜನೆಗಳು ಕುಂಟುತ್ತಾ ಸಾಗುತ್ತಿರುವುದು ನಿಜವೇ; | ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ಆಯವ್ಯಯದಲ್ಲಿಯೇ ಸೂಕ್ತ ಅನುದಾನವನ್ನು ಕಲ್ಪಿಸಿರುತ್ತದೆ ಹಾಗು ರಾಜ್ಯದ ಸರ್ವತೋಮುಖ ಅಭಿವೃದ್ಧಿಗಾಗಿ ಕಲ್ಯಾಣ ಕಾರ್ಯಕ್ರಮಗಳನ್ನು ಮತ್ತು ಬಂಡವಾಳ ಯೋಜನೆಗಳಿಗೂ ಅಗತ್ಯ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿರುತ್ತದೆ. ಗ್ಯಾರಂಟಿ ಯೋಜನೆಗಳು ಸೇರಿದಂತೆ ಎಲ್ಲಾ ಅಭಿವೃದ್ಧಿ ಯೋಜನೆಗಳು ಆಯವ್ಯಯದಲ್ಲಿ ಅಂದಾಜಿಸಿದಂತೆ ವೆಚ್ಚವಾಗುತ್ತಿದ್ದು, ಯಾವುದೇ ಅನುದಾನ ಕೊರತೆ ಉಂಟಾಗಿರುವುದಿಲ್ಲ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಹಾಗಿದ್ದಲ್ಲಿ, ಗ್ಯಾರಂಟಿ ಯೋಜನೆಗಳ ಮತ್ತು ಅಭಿವೃದ್ಧಿ ಯೋಜನೆಗಳ ಬಗ್ಗೆ ಸರ್ಕಾರ ಯಾವ ರೀತಿಯಲ್ಲಿ ಸಮತೋಲನವನ್ನು ಕಾಯ್ದುಕೊಂಡಿದೆ? | ಅನ್ವಯಿಸುವುದಿಲ್ಲ |

FD/177/2024-DS-BR-FINANCE DEPT.SEC

(ಸಿದ್ದರಾಮಯ್ಯ)
ಮುಖ್ಯಮಂತ್ರಿ